ಮುಖ್ಯ ಅತಿಥಿಗಳಾಗಿ ಆಗಮಿಸಿ ಬಹುಮಾನ ವಿತರಿಸಿದ ಕೆಪಿಎಸ್‌ಸಿ ಮಾಜಿ ಸದಸ್ಯರಾದ ಶ್ರೀ ಎಸ್. ರುದ್ರೇಗೌಡರವರು ಮಾತನಾಡಿ ಪೂಜ್ಯ ರಾಜೇಂದ್ರ ಮಹಾಸ್ವಾಮಿಗಳ ಉದ್ದೇಶ ಮಹತ್ತಾಗಿದ್ದ ಕಾರಣದಿಂದಲೇ ಜೆಎಸ್‌ಎಸ್ ಶಿಕ್ಷಣ ಸಂಸ್ಥೆಗಳು ಇಂದು ಉನ್ನತವಾಗಿ ಬೆಳೆದು ಸಮಾಜಕ್ಕೆ ಅತ್ಯುತ್ತಮ ಕೊಡುಗೆಯನ್ನು ನೀಡುತ್ತಿವೆ. ಇಂತಹ ಸಂಸ್ಥೆಗಳಿಂದ ಮಾತ್ರ ಪ್ರಪಂಚಕ್ಕೆ ಮಾರ್ಗದರ್ಶನ ಸಾಧ್ಯ' ಎಂದು ಅಭಿಪ್ರಾಯಪಟ್ಟರು.

ಇದೇ ಸಂದರ್ಭದಲ್ಲಿ ಭಾರತ ಸಂವಿಧಾನ : ರಸಪ್ರಶ್ನೆ ಸ್ಪರ್ಧೆ, ಅಂತರಕಾಲೇಜು ಕ್ರೀಡಾಸ್ಪರ್ಧೆ, ಸಾಂಸ್ಕೃತಿಕ –ಸಾಹಿತ್ಯಕ ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಬಹುಮಾನಗಳನ್ನು ಮತ್ತು ಪರೀಕ್ಷೆಗಳಲ್ಲಿ ಉತ್ತಮ ಸಾಧನೆಗೈದ ವಿದ್ಯಾರ್ಥಿಗಳಿಗೆ ದತ್ತಿ ಪುರಸ್ಕಾರಗಳನ್ನು ನೀಡಲಾಯಿತು.

ಕಾಲೇಜು ಸಮುಚ್ಚಯದ ಮುಖ್ಯ ಕಾರ್ಯನಿರ್ವಾಹಕರಾದ ಪ್ರೊ. ಬಿ.ವಿ. ಸಾಂಬಶಿವಯ್ಯನವರು ಸ್ವಾಗತ ಕೋರಿದರು. ಪ್ರಾಂಶುಪಾಲರಾದ ಪ್ರೊ. ಎಂ. ಮಹದೇವಪ್ಪನವರು ಪ್ರಾಸ್ತಾವಿಕ ಮಾತುಗಳನ್ನಾಡಿದರು. ಸುವರ್ಣ ಮಹೋತ್ಸವ ಆಚರಣಾ ಸಮಿತಿಯ ಕಾರ್ಯದರ್ಶಿಗಳಾದ ಪ್ರೊ. ಡಿ. ಎಸ್. ಸದಾಶಿವಮೂರ್ತಿಯವರು ನಿರೂಪಿಸಿದರು. ಕು. ಪೂರ್ಣಿಮ ಪ್ರಾರ್ಥಿಸಿದರು. ಪದವಿಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಶ್ರೀ ಎಸ್. ಸೋಮಶೇಖರ ಅವರು ವಂದಿಸಿದರು.

ಗೆ,

ಸಂಪಾದಕರು

---------------------

---------------------

ಪ್ರಾಂಶುಪಾಲರು

PRINCIPAL
J. S. S. COLLEGE
Ooty Road, Mysore-570 025